# ಕರ್ನಾಟಕ ಸರ್ಕಾರದ ನಡವಳಗಳು

**ವಿಷಯ:** ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವಿವಿಧ ಕಾರ್ಯಕ್ರಮ/ ಯೋಜನೆಗಳಿಗೆ ನಿಗಧಿಪಡಿಸಿರುವ ಕುಟುಂಬದ ವಾರ್ಷಿಕ ಆದಾಯ ಮಿತಿಗಳನ್ನು ಪರಿಷ್ಕರಿಸುವ ಬಗ್ಗೆ.

**ಓದಲಾಗಿದೆ:** ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಬೆಂಗಳೂರು ರವರ ಏಕಕಡತ ಸಂಖ್ಯೆ: ಅಸಂನಿ:ಆದಾಯಮಿತಿ:ಸಿಆರ್-01:2014-15, ದಿ: 19.05.2014

****

**ಪ್ರಸ್ತಾವನೆ:**

ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯನ್ನು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಬೇರ್ಪಡಿಸಿ 1999-2000ನೇ ಸಾಲಿನಿಂದ ಅಸ್ತಿತ್ವಕ್ಕೆ ತರಲಾಯಿತು. ಆಗ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ಇದ್ದಂತಹ ಅಲ್ಪಸಂಖ್ಯಾತರ ಯೋಜನೆ/ಕಾರ್ಯಕ್ರಮಗಳನ್ನು ಅಲ್ಪಸಂಖ್ಯಾತರ ಇಲಾಖೆಗೆ ವರ್ಗಾಯಿಸಲಾಯಿತು. ಇಲಾಖೆಯು ಪ್ರಾರಂಭವಾಗಿ 15 ವರ್ಷ ಪೂರ್ಣಗೊಂಡಿರುವುದು. ಆದರೆ ಇಲಾಖಾ ಕಾರ್ಯಕ್ರಮಗಳಿಗೆ ಅಂದು ನಿಗಧಿಪಡಿಸಿದ ಆದಾಯ ಮಿತಿಯನ್ನೇ ಈಗಲೂ ಸಹ ಅದೇ ಆದಾಯ ಮಿತಿಯನ್ನು ಅಳವಡಿಸಲಾಗುತ್ತಿದೆ. ಆದರೆ ಇತ್ತೀಚಿನ ದಿನಗಳಲ್ಲಿ ಎಲ್ಲಾ ಸಾಮಾಗ್ರಿಗಳ ದರಗಳು ಹೆಚ್ಚಾಗಿದ್ದು, ಇದರಿಂದ ಅಂದು ನಿಗಧಿಪಡಿಸಿದ ಆದಾಯಕ್ಕೆ ಇಂದಿನ ದಿನಗಳಲ್ಲಿ ವಿದ್ಯಾರ್ಥಿಗಳು/ಅಭ್ಯರ್ಥಿಗಳು ಅಲ್ಪಸಂಖ್ಯಾತರ ಇಲಾಖಾ ಕಾರ್ಯಕ್ರಮಗಳಿಗೆ/ವಿದ್ಯಾರ್ಥಿನಿಲಯಗಳಿಗೆ ಪ್ರವೇಶ ಪಡೆಯಲು/ಸೌಲಭ್ಯ ಪಡೆಯಲು ಸಾಧ್ಯವಾಗುತ್ತಿಲ್ಲ. ಇದರಿಂದ ಇಲಾಖಾ ಪ್ರಗತಿಯು ಕುಂಠಿತವಾಗಿದೆ. ಇತ್ತೀಚಿನ ದಿನಗಳಲ್ಲಿ ಆಗಿರುವ ಹಣದುಬ್ಬರವನ್ನು ಗಮನದಲ್ಲಿರಿಸಿಕೊಂಡು ಇಲಾಖಾ ಕಾರ್ಯಕ್ರಮಗಳಿಗೆ ಆದಾಯ ಮಿತಿಯನ್ನು ಹೆಚ್ಚಿಸಿದ್ದಲ್ಲಿ, ಅಲ್ಪಸಂಖ್ಯಾತರ ಸಮುದಾಯದ ಬಡವರಿಗೆ ಹೆಚ್ಚಿನ ಸಂಖ್ಯೆಯಲ್ಲಿ ಅಲ್ಪಸಂಖ್ಯಾತರ ಯೋಜನೆಗಳ ಸೌಲಭ್ಯವನ್ನು ದೊರಕಿಸಿ ಕೊಡಲು ಸಾಧ್ಯವಾಗುವುದರಿಂದ, ಆದಾಯ ಮಿತಿಯನ್ನು ಹೆಚ್ಚಿಸಲು ಕೋರಿ ಮೇಲೆ ಓದಲಾದ ಕ್ರ.ಸಂ (1)ರಲ್ಲಿ ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ, ಬೆಂಗಳೂರು. ಏಕಕಡತದಲ್ಲಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಸರ್ಕಾರವು ಸದರಿ ಪ್ರಸ್ತಾವನೆಯನ್ನು ಕೂಲಂಕುಶವಾಗಿ ಪರಿಶೀಲಿಸಿದ್ದು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ನಿರ್ದೇಶಕರು ಸಲ್ಲಿಸಿರುವ ಪ್ರಸ್ತಾವನೆಯ ಮೇರೆಗೆ ಹಾಗೂ ಇತ್ತೀಚಿನ ವರ್ಷಗಳಲ್ಲಿ ಉಂಟಾಗಿರುವ ಹಣದುಬ್ಬರವನ್ನು ಗಮನದಲ್ಲಿರಿಕೊಂಡು ಅಲ್ಪಸಂಖ್ಯಾತರ ವರ್ಗಗಳಲ್ಲಿ ಬಡ ವಿದ್ಯಾರ್ಥಿಗಳಿಗೆ ಹೆಚ್ಚಿನ ಅನುಕೂಲಗಳನ್ನು ಕಲ್ಪಿಸುವ ಹಿತದೃಷ್ಠಿಯಿಂದ ಇಲಾಖೆಯ ವಿವಿಧ ಕಾರ್ಯಕ್ರಮ / ಯೋಜನೆಗಳಲ್ಲಿನ

ಸವಲತ್ತುಗಳನ್ನು ಪಡೆದುಕೊಳ್ಳುವ ಸಲುವಾಗಿ ಹಾಲಿ ನಿಗಧಿಪಡಿಸಿರುವ ಕುಟುಂಬದ ವಾರ್ಷಿಕ ಆದಾಯ ಮಿತಿಯನ್ನು ಪರಿಷ್ಕರಿಸಲು ಸರ್ಕಾರವು ನಿರ್ಣಯಿಸಿದೆ. ಅದರಂತೆ, ಈ ಆದೇಶ

**ಸರ್ಕಾರದ ಆದೇಶ ಸಂಖ್ಯೆ: MWD 21 MDS 2011 ಬೆಂಗಳೂರು, ದಿ: 02-08-2014**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನಲೆಯಲ್ಲಿ, ಅಲ್ಪಸಂಖ್ಯಾತರ ವರ್ಗಗಳ ಕಲ್ಯಾಣ ಇಲಾಖೆಯ ವಿವಿಧ ಯೋಜನೆ/ಕಾರ್ಯಕ್ರಮಗಳಿಗೆ ಫಲಾನುಭವಿಗಳಿಗೆ ಈಗಾಗಲೇ ನಿಗಧಿಪಡಿಸಲಾಗಿದ್ದ ಕುಟುಂಬದ ವಾರ್ಷಿಕ ಆದಾಯ ಮಿತಿಗಳನ್ನು ಈ ಆದೇಶದ **ಅನುಬಂಧ**ದಲ್ಲಿರುವಂತೆ ತಕ್ಷಣದಿಂದ ಜಾರಿಗೆ ಬರುವಂತೆ ಪರಿಷ್ಕರಿಸಿ ಆದೇಶಿಸಿದೆ.

ವಿವಿಧ ಕಾರ್ಯಕ್ರಮಗಳಡಿ ಫಲಾನುಭವಿಗಳಅರ್ಹತೆಗಾಗಿ ನಿಗಧಿಪಡಿಸಿರುವ ವಾರ್ಷಿಕ ಆದಾಯದ ಮಿತಿಯನ್ನು ಸಂಬಂಧಪಟ್ಟ ಪ್ರಾಧಿಕಾರದಿಂದ ನಿಗದಿಪಡಿಸಿದ ನಮೂನೆಯಲ್ಲಿ ಪಡೆದು ಮಂಡಿಸುವ ಫಲಾನುಭವಿಗಳನ್ನು ಮಾತ್ರ ನಿಯಮಾನುಸಾರ ಪರಿಗಣಿಸತಕ್ಕದ್ದು. ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಲ್ಲಿನ ಎಲ್ಲಾ ಯೋಜನೆಗಳಲ್ಲಿ ಮತೀಯ ಅಲ್ಪಸಂಖ್ಯಾತ ಸಮುದಾಯಗಳಿಂದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್ ಮತ್ತು ಪಾರ್ಸಿ ಜನಾಂಗಗಳನ್ನು ಪರಿಗಣಿಸಲಾಗುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ. ಆಇ-424 ವೆಚ್ಚ-3 2014,ದಿ:03-07-2014 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಿದೆ.

**ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ**
**ಮತ್ತು ಅವರ ಹೆಸರಿನಲ್ಲಿ**

(ಎಂ.ನಾಗರತ್ನ) 2/8/14
**ಸರ್ಕಾರದ ಉಪ ಕಾರ್ಯದರ್ಶಿ,**
**ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ,**

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು-ಇವರಿಗೆ ಮುಂದಿನ ವಿಶೇಷ ಸಂಚಿಕೆಯಲ್ಲಿ ಪ್ರಕಟಿಸಿ 500 ಪ್ರತಿಗಳನ್ನು ಒದಗಿಸಲು ಕೋರಿದೆ.

ಗೆ,

1) ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು (ಎ ಮತ್ತು ಇ) ಕರ್ನಾಟಕ, ಬೆಂಗಳೂರು
2) ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು,
3) ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಬೆಂಗಳೂರು.
4) ಎಲ್ಲಾ ಇಲಾಖಾ ಮುಖ್ಯಸ್ಥರು
5) ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು,
6) ಎಲ್ಲಾ ಜಿಲ್ಲೆಗಳ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು

7) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಅಲ್ಪಸಂಖ್ಯಾತ ಅಭಿವೃದ್ಧಿ ನಿಗಮ ನಿಯಮಿತ, ವಿ.ವಿ.ಗೋಪುರ, ಬೆಂಗಳೂರು,
8) ಕಾರ್ಯದರ್ಶಿಗಳು, ರಾಜ್ಯ ಅಲ್ಪಸಂಖ್ಯಾತರ ಆಯೋಗ, ಬೆಂಗಳೂರು.
9) ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಬೆಂಗಳೂರು,
10) ಕಾರ್ಯ ನಿರ್ವಹಣಾಧಿಕಾರಿಗಳು, ಕರ್ನಾಟಕ ರಾಜ್ಯ ಹಜ್ ಸಮಿತಿ, ಬೆಂಗಳೂರು,
11) ರಿಜಿಸ್ಟ್ರಾರ್, ಕರ್ನಾಟಕ ರಾಜ್ಯ ಉರ್ದು ಅಕಾಡೆಮಿ, ಬೆಂಗಳೂರು,
12) ಆಂತರಿಕ ಆರ್ಥಿಕ ಸಲಹೆಗಾರರು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ,
13) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-3&9), ಬೆಂಗಳೂರು.
14) ಮಾನ್ಯ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರ ಆಪ್ತ ಕಾರ್ಯದರ್ಶಿಗಳು,
15) ಎಲ್ಲಾ ಜಿಲ್ಲೆಯ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣಾಧಿಕಾರಿಗಳು
16) ಶಾಖಾ ರಕ್ಷ ಕಡತ/ ಹೆಚ್ಚುವರಿ ಪ್ರತಿ